# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:30.03.2020**

**ನಗರದ ನಿರ್ಗತಿಕರು ಹಾಗೂ ಕೂಲಿ ಕಾರ್ಮಿಕರಿಗೆ ಆಹಾರ ಸಾಮಗ್ರಿಗಳು, ಮಾಸ್ಕ್, ಸ್ಯಾನಿಟೈಸರ್ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿರುವ ಬಗ್ಗೆ:**



ಇಸ್ಕಾನ್‌ನ ಅಕ್ಷಯಪಾತ್ರೆ ವತಿಯಿಂದ ಬಡವರ್ಗದ ಜನರು, ವಲಸಿಗರು, ಕಟ್ಟಡ ಕೂಲಿ ಕಾರ್ಮಿಕರಿಗೆ 21 ದಿನಗಳವರೆಗೆ ಅಡುಗೆ ಮಾಡಲು ಬೇಕಾಗಿರುವ ಅಕ್ಕಿ, ಉಪ್ಪು, ಎಣ್ಣೆ, ಬೇಳೆ, ಸಾಂಬರ್ ಪುಡಿ ಸೇರಿದಂತೆ 14 ಕೆ.ಜಿಯ 40,000 ಬಾಕ್ಸ್ ವಿತರಿಸುವ ಹಾಗೂ ರಾಜಸ್ತಾನಿ ಯೂತ್ ಅಸೋಸಿಯೇಷನ್ ವತಿಯಿಂದ ಪೌರಕಾರ್ಮಿಕರು, ಪೊಲೀಸ್ ಸಿಬ್ಬಂದಿಗೆ 60,000 ಮಾಸ್ಕ್, 1,000 ಸ್ಯಾನಿಟೈಸರ್ ಹಾಗೂ ಆರೋಗ್ಯ ಸಿಬ್ಬಂದಿಗೆ 100 ಸಂಪೂರ್ಣ ದೇಹಗವಚು ವಿತರಿಸುವ ಕಾರ್ಯಕ್ರಮಕ್ಕೆ ಪೂಜ್ಯ ಮಹಾಪೌರರು, ಕಂದಾಯ ಸಚಿಚರು ಶ್ರೀ ಆರ್.ಅಶೋಕ್ ರವರು ಚಾಲನೆ ನೀಡಿದರು. ಈ ವೇಳೆ ಸಂಸದರು ಶ್ರೀ ಪಿ.ಸಿ.ಮೋಹನ್, ಶ್ರೀ ತೇಜಸ್ವಿ ಸೂರ್ಯ, ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಡ ವರ್ಗದವರು, ಕೂಲಿ ಕಾರ್ಮಿಕರು ಹಾಗೂ ಕಟ್ಟಡ ಕಾರ್ಮಿಕರಿಗೆ ಆಹಾರದ ಕೊರತೆ ನೀಗಿಸುವ ಸಲುವಾಗಿ ಇಸ್ಕಾನ್ ಸಂಸ್ಥೆಯ ಅಕ್ಷಯ ಪಾತ್ರೆ ಯಡಿ ಮೊದಲಿಗೆ 20,000 ಬಾಕ್ಸ್ ವಿತರಿಸಲು ಕ್ರಮವಹಿಸಲಾಗಿತ್ತು. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ ಎಂಬ ಕಾರಣಕ್ಕೆ 40,000 ಬಾಕ್ಸ್ ವಿತರಣೆ ಮಾಡಲು ಮುಂದಾಗಿದ್ದಾರೆ ಎಂದು ಕಂದಾಯ ಸಚಿವರು ಆರ್.ಅಶೋಕ್ ರವರು ತಿಳಿಸಿದರು.

ಆಹಾರ ಸಾಮಗ್ರಿ, ಮಾಸ್ಕ್, ಸ್ಯಾನಿಟೈಸರ್ ವಿತರಿಸಉವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಂದಾಯ ಸಚಿಚರು, ನಗರದಲ್ಲಿ ಊಟದ ವ್ಯವಸ್ಥೆ ಕಲ್ಪಿಸುವಂತೆ 15,000 ನೊಂದಾವಣಿ ಮಾಡಿಕೊಂಡಿದ್ದಾರೆ. ಆ ಸಂಖ್ಯೆ ಪ್ರತಿನಿತ್ಯ ಹೆಚ್ಚುತ್ತಲೇ ಇದೆ. ಈ ಸಂಬಂಧ ಪಾಲಿಕೆ 8 ವಲಯ ಹಾಗೂ ಡಿಸಿಪಿ ಕಛೇರಿಗಳಿಗೆ ಆಹಾರ ಸಾಮಗ್ರಿಗಳನ್ನು ಇಂದೇ ಕಳುಹಿಸಿ, ಎಲ್ಲೂ ಹಂಚಿಕೆ ಮಾಡದೆ ಹೊಯ್ಸಳ ವಾಹನದ ಮೂಲಕ ಮನೆ-ಮನೆಗೆ ತಲುಪಿಸುವ ವ್ಯವಸ್ಥೆ ಮಾಡಲಾಗುವುದು. ಕಟ್ಟಡ ಕಾರ್ಮಿಕರು ಇದ್ದಲ್ಲಿ ಆಹಾರ ಸಹಾಯವಾಣಿ 15524 ಅಥವಾ ಪೊಲೀಸ್ ಇಲಾಖೆ 100ಗೆ ಕರೆ ಮಾಡಿದರೆ ಕೂಡಲೆ ಆಹಾರ ವ್ಯವಸ್ಥೆ ಕಲ್ಪಿಸಲಾಗವುದು ಎಂದು ಹೇಳಿದರು.

ಡೆವಲಪರ್ಸ್ ಹಾಗೂ ಗುತ್ತಿಗೆದಾರರ ಜೊತೆ ನಾಳೆ ಸಭೆ ನಡೆಸಿ, ಬೇರೆ ಕಡೆಯಿಂದ ಕೆಲಸ ಮಾಡಲು ಬಂದಿರುವ ಕಟ್ಟಡ ಕಾರ್ಮಿಕರನ್ನು ಯಾವುದೇ ಕಾರಣಕ್ಕೂ ಅವರ ಊರುಗಳಿಗೆ ಹೂಗುವಂತೆ ಒತ್ತಾಯ ಮಾಡಬಾರದು. ಇರುವ ಸ್ಥಳದಲ್ಲೇ ಊಟ ಹಾಗೂ ವೈದ್ಯಕೀಯ ತಪಾಸಣೆ ಮಾಡಿಸಬೇಕು. ಒಂದು ವೇಳೆ ಮಾಡದಿದ್ದಲ್ಲಿ, ಅವರಿಗೆ ನೀಡಿರುವ ಕಟ್ಟಡ ನಿರ್ಮಾಣ ನಕ್ಷೆಯನ್ನು ಕೂಡಲೆ ಹಿಂಪಡೆದು, ಅಂತಹವರ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರಾಜಸ್ಥಾನಿ ಯೂತ್ ಅಸೋಶಿಯೇಷನ್ ವತಿಯಿಂದ ಪೌರಕಾರ್ಮಿಕರಿಗೆ 50,000 ಮಾಸ್ಕ್‌ಗಳನ್ನು ವಿತರಿಸಲು ಕ್ರಮವಹಿಸಲಾಗಿದೆ. ಪ್ರತಿ ಪೌರಕಾರ್ಮಿಕರಿಗೂ 5 ಮಾಸ್ಕ್‌ಗಳನ್ನು ವಿತರಿಸಲಾಗುತ್ತಿದೆ. ಪೊಲೀಸ್ ಸಿಬ್ಬಂದಿಗೆ 10,000 ಮಾಸ್ಕ್‌ಗಳನ್ನು ನೀಡಲಾಗುತ್ತಿದೆ. ಇದರ ಜೊತೆಗೆ 800 ಸ್ಯಾನಿಟೈಸರ್ ನೀಡಲಾಗಿದೆ. ಎಲ್ಲರೂ ಶ್ರಮವಹಿಸಿ ಕಾರ್ಯನಿರ್ವಹಿಸುತ್ತಿದ್ದಾರೆ. ಮಾಧ್ಯಮದವರಿಗೂ 10,000 ಮಾಸ್ಕ್ ವಿತರಿಸಲು ಸೂಚಿಸಲಾಗಿದೆ ಎಂದರು.

ವೈದ್ಯರು, ನರ್ಸ್‌ಗಳಿಗೆ ಮಾಲೀಕರು ಮನೆ ಮಾಲೀಕ ಮನೆ ಖಾಲಿ ಮಾಡುವಂತೆ ಒತ್ತಡವೇರುತ್ತಿರುವ ದೂರುಗಳು ಕೇಳಿಬರುತ್ತಿವೆ. ರಾಜ್ಯ ವಿಪತ್ತು ನಿರ್ವಹಣಾ ಕಾಯ್ದೆ ಅಡಿ, ಆ ರೀತಿ ಯಾರೊಬ್ಬರಿಗೂ ಕಿರುಕುಳ ಮಾಡಬಾರದು. ಆ ರೀತಿ ಮಾಡಿದರೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಮಳಿಗೆಗಳಲ್ಲಿ ದಿನನಿತ್ಯದ ವಸ್ತುಗಳನ್ನು ಅಗತ್ಯಕ್ಕಿಂತ ಹೆಚ್ಚು ದರದಲ್ಲಿ ಮಾರಾಟ ಮಾಡುವುದು ಕಂಡುಬಂದರೆ ಸೆರೆಮನೆ ವಾಸ ಅನುವಹಿಸಬೇಕಾಗುತ್ತದೆ. ಹಣ್ಣು, ತರಕಾರಿ ಕಾಳಸಂತೆಯಲ್ಲಿ ಮಾರಾಟ ಮಾಡುವದು ಕಂಡಬಂದರೆ ಜಿಲ್ಲಾಧಿಕಾರಿಗಳು ಅನಿರೀಕ್ಷಿತ ತಪಾಸಣೆ ನಡೆಸಿ ಜಪ್ತಿ ಮಾಡಬಹುದು ಎಂದರು.

[**ಸೂಚನೆ:** ಹೆಚ್ಚಿನ ಮಾಹಿತಿಗಾಗಿ ಕಂದಾಯ ಸಚಿವರು ಮಾತನಾಡಿರುವ ಆಡಿಯೋ ರೆಕಾರ್ಡ್ ಅನ್ನು ಲಗತ್ತಿಸಲಾಗಿರುತ್ತದೆ.]

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**